ಒಂಟಿ ಮಹಿಳೆಯರ ಹತ್ಯೆ ಪ್ರಕರಣಗಳು

1248(1421); ಶ್ರೀ ಅಶೋಕ್ ಆರ್. (ಪದ್ಮನಾಭ ನಗರ)

ಅ) ಬೆಂಗಳೂರು ನಗರದಲ್ಲಿ ಒಂಟಿ ಮಹಿಳೆಯರ ನಿಗೂಢ ಹತ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ ಈ ರೀತಿ ಹತ್ಯೆಯಾಗುವುದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು;

ಇ) ಒಂಟಿ ಮಹಿಳೆಯರ ಗುರುತಿಸಿ ರಕ್ಷಣೆ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

ಈ) ಹಾಗಿದ್ದಲ್ಲಿ, ಈ ಮನೆಗಳ ಮುಂದೆ ಬೆಳಿಗ್ಗೆ ಮತ್ತು ರಾತ್ರಿ ಸಮಯದಲ್ಲಿ ಗಸ್ತು ತಿರುಗಲು ಪೇದೆಗಳ ವ್ಯವಸ್ಥೆ ಮಾಡಲಾಗಿದೆಯೇ?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) ಬೆಂಗಳೂರು ನಗರದಲ್ಲಿ ಒಂಟಿ ಮಹಿಳೆಯರ ನಿಗೂಢ ಹತ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಕಳೆದ 3 ವರ್ಷಗಳಲ್ಲಿ ಒಂಟಿ ಮಹಿಳೆಯರ ಹತ್ಯೆ ಪ್ರಕರಣಗಳು ಮತ್ತು ಪತ್ತೆಯಾದ ಪ್ರಕರಣಗಳ ವಿವರ ಈ ಕೆಳಕಂಡಂತಿದೆ.

ವರ್ಷ	ವರದಿ	ಪತ್ತೆ
2011	10	09
2012	06	03
2013	05	03
2014	01	01
ಒಟ್ಟು	**22**	**16**

ಆ) ಪೊಲೀಸ್ ಠಾಣಾ ಸರಹದ್ದಿನಲ್ಲಿ ಒಂಟಿ ಮಹಿಳೆಯರು ವಾಸವಾಗಿರುವ ಮನೆಗಳನ್ನು ಪ್ರತ್ಯೇಕವಾಗಿ ಗುರುತಿಸಿ ಅಂತಹ ಮನೆಗಳಿಗೆ ಪಾಯಿಂಟ್ ಪುಸ್ತಕ / ಇ–ಬೀಟ್ ಅಳವಡಿಸಿ ಹಗಲು ಮತ್ತು ರಾತ್ರಿ ಗಸ್ತಿನ ಅಧಿಕಾರಿ / ಸಿಬ್ಬಂದಿಗಳಿಂದ ಪರಿಶೀಲನೆ ಮಾಡಿಸಲಾಗುತ್ತಿದೆ.

ಇ) ಪೊಲೀಸ್ ಠಾಣಾ ಸರಹದ್ದಿನಲ್ಲಿ ವಾಸಿಸುತ್ತಿರುವ ಒಂಟಿ ಮಹಿಳೆಯರಿಗೆ ಅಪರಿಚಿತ ವ್ಯಕ್ತಿಗಳು ಆಗುಂತಕರಿಂದ ಎಚ್ಚರವಹಿಸುವಂತೆ ಹಾಗೂ ಅನುಮಾನಸ್ಪದ ವ್ಯಕ್ತಿಗಳು ಕಂಡು ಬಂದಲ್ಲಿ ಕೂಡಲೇ ಹತ್ತಿರದ ಪೊಲೀಸ್ ಠಾಣೆಗಳಿಗಾಗಲಿ ಹಾಗೂ ನಿಯಂತ್ರಣ ಕೋಣೆಗಾಗಲಿ ಮಾಹಿತಿ ನೀಡುವಂತೆ ಕರಪತ್ರಗಳ ಮೂಲಕ ತಿಳುವಳಿಕೆಗಳನ್ನು ನೀಡಲಾಗುತ್ತಿದೆ. ಅಲ್ಲದೇ ಸರಹದ್ದುಗಳಲ್ಲಿ ಸಾರ್ವಜನಿಕ ಸಭೆಗಳನ್ನು ಏರ್ಪಡಿಸಿ ಅರಪಾಧಗಳಿಂದ ಎಚ್ಚರವಹಿಸುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.

ಈ) ಹಗಲು ಮತ್ತು ರಾತ್ರಿ ಗಸ್ತು ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆ.

ರಸ್ತೆ ಗುಂಡಿಗಳನ್ನು ಸರಿಪಡಿಸುವುದು

1249(1422); ಶ್ರೀ ಆರ್. ಅಶೋಕ್

ಅ) ಪದ್ಮನಾಭನಗರ ವಿಧಾನಸಭಾ ಕ್ಷೇತ್ರದಲ್ಲಿ ರಸ್ತೆಗಳೆಲ್ಲಾ ಗುಂಡಿಬಿದ್ದು ಸಾರ್ವಜನಿಕರು ಓಡಾಡಲು ತೊಂದರೆಯಾಗುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಗುಂಡಿಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಹಾಗಿದ್ದಲ್ಲಿ, ಈ ರಸ್ತೆ ಗುಂಡಿಗಳನ್ನು ಯಾವಾಗ ಸರಿಪಡಿಸಲಾಗುವುದು; (ವಿವರ ನೀಡುವುದು)?